# ಫೆನೆಸ್ಟಾ ಶೋರೂಂ ಉದ್ಘಾಟನೆ

**ಮಂಗಳೂರು:** ಭಾರತದ ಅತಿದೊಡ್ಡ ಕಿಟಕಿ ಮತ್ತು ಬಾಗಿಲುಗಳ ಬ್ರಾಂಡ್ ಆಗಿರುವ ಫೆನೆಸ್ಟಾದ ಹೊಸ ಎಕ್ಸ್‌ಕ್ಲೂಸಿವ್ ಶೋರೂಂ ಮಂಗಳೂರಿನ ನಂತೂರು ಹೂವಿನ ಮಾರುಕಟ್ಟೆ ಬಳಿಯ ಬಿಕರ್ನಕಟ್ಟೆಯಲ್ಲಿ ಆರಂಭವಾಗಿದೆ. ಇದು ಅತ್ಯುನ್ನತ ದರ್ಜೆಯ ಯುಪಿವಿಸಿ ಕಿಟಕಿ, ಬಾಗಿಲುಗಳ ಸಂಗ್ರಹ ಹೊಂದಿದೆ.

ಫೆನೆಸ್ಟಾ ಬ್ಯುಸಿನೆಸ್ ಹೆಡ್ ಸಾಕೇತ್ ಜೈನ್ ಮಾತನಾಡಿ, 700ಕ್ಕೂ ಹೆಚ್ಚು ವೈವಿಧ್ಯಮಯ ಶ್ರೇಣಿಯ ಆಕರ್ಷಕ ಉತ್ಪನ್ನ ಹೊಂದಿದೆ. ಫೆನೆಸ್ಟಾ ಉತ್ಪನ್ನ ಗ್ರಾಹಕರ ಅಗತ್ಯತೆ ಮತ್ತು ಪರಿಸರಾತ್ಮಕ ಅಂಶಗಳಾದ ಶಬ್ದ, ಮಳೆ, ದೂಳು, ಮಾಲಿನ್ಯವನ್ನು ಗಮನದಲ್ಲಿಟ್ಟುಕೊಂಡು ತಯಾರಿಸಲಾಗಿದೆ ಎಂದು ವಿವರಿಸಿದರು.

ಶೋರೂಂನಲ್ಲಿ ಉತ್ಪನ್ನಗಳ ಪ್ರದರ್ಶನದೊಂದಿಗೆ ಗ್ರಾಹಕರು ವೈವಿಧ್ಯಮಯ ಶ್ರೇಣಿಯನ್ನು ಅನುಭವಿಸಲು, ಬ್ರಾಂಡ್ ಅರ್ಥ ಮಾಡಿಕೊಳ್ಳಲು, ಮಾಹಿತಿಯುಕ್ತ ನಿರ್ಧಾರ ಕೈಗೊಳ್ಳಲು ಅನುವಾಗಲಿದೆ ಎಂದರು. ಇದು ಕರ್ನಾಟಕದ ಮೊಟ್ಟ ಮೊದಲ ಮಳಿಗೆಯಾಗಿದ್ದು, 2020ರ ಡಿಸೆಂಬರ್ ಒಳಗಾಗಿ ದೇಶದ ಎಲ್ಲ ರಾಜ್ಯಗಳಿಗೆ ಇದನ್ನು ವಿಸ್ತರಿಸಲಾಗುವುದು ಎಂದು ಹೇಳಿದರು.